# ಕರ್ನಾಟಕ ವಿಧಾನ ಪರಿಷತ್ತು

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಗೋವಿಂದರಾಜು, ಇವರು ನಿಯಮ 72 ರಡಿ ನೀಡಿರುವ ಗಮನ ಸೆಳೆಯುವ ಸೂಚನೆ ಬಗ್ಗೆ

---

**ವಿಷಯ**:

ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಕಳಪೆ ಗುಣಮಟ್ಟದ ಕಂಪ್ಯೂಟರ್, ಜೆರಾಕ್ಸ್ ಯಂತ್ರ, ಸಿಸಿಟಿವಿ ಕ್ಯಾಮೆರಾಗಳೂ ಸೇರಿದಂತೆ ಇತರೆ ಎಲೆಕ್ಟ್ರಾನಿಕ್ ಉಪಕರಣಗಳು ಪೂರೈಕೆಯಾಗಿರುವುದು ತನಿಖೆಯಿಂದ ದೃಢಪಟ್ಟಿದ್ದು, ಕೋಟ್ಯಂತರ ರೂ. ಅಕ್ರಮ ನಡೆದಿರುವ ಆರೋಪಗಳು ಕೇಳಿ ಬಂದಿದೆ. ಬೆಂಗಳೂರು ನಗರದ ಪೂರ್ವ, ಪಶ್ಚಿಮ, ದಕ್ಷಿಣ, ಉತ್ತರ ಮತ್ತು ಕೇಂದ್ರ ವಲಯದ ಗ್ರಂಥಾಲಯಗಳ ಅಧಿಕಾರಿ, ಸಿಬ್ಬಂದಿ 2009-10 ರಿಂದ 2018-20 ರವರೆಗೆ ಕೆಟಿಪಿಪಿ ನಿಯಮಗಳನ್ನು ಉಲ್ಲಂಘಿಸಿ ಬ್ಲಾಕ್ ಲಿಸ್ಟ್ ಸೇರಬೇಕಾದ ಸಂಸ್ಥೆಯಿಂದ ಎಲೆಕ್ಟ್ರಾನಿಕ್ ಸಾಮಗ್ರಿಗಳನ್ನು ಖರೀದಿಸಿದ್ದಾರೆ 2009 ರಿಂದ 2019ರ ನಡುವಿನ ವ್ಯವಹಾರ 2021 ರಲ್ಲಿ ಬೆಳಕಿಗೆ ಬಂದರೂ ಇದುವರೆಗೂ ಕ್ರಮವಿಲ್ಲ ಈ ವಿಷಯ ಸಾರ್ವಜನಿಕ ಮಹತ್ವದಾಗಿರುವುದರಿಂದ ಮಾನ್ಯ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಉತ್ತರ:**

ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಕಳಪೆ ಸಾಮಗ್ರಿಗಳನ್ನು ಸರಬರಾಜು ಮಾಡಿ ಅಕ್ರಮವೆಸಗಿರುವ ಮೆ:ಅಕ್ನಾ ಟೆಕ್ನಾಲಜಿ ಕಂಪನಿಯನ್ನು ಕಪ್ಪುಪಟ್ಟಿಗೆ ಸೇರಿಸುವ ಪ್ರಕರಣದ ಕುರಿತಂತೆ ರಾಜ್ಯ ಯೋಜನಾ ನಿರ್ದೇಶಕರು, ಕರ್ನಾಟಕ ಸಮಗ್ರ ಶಿಕ್ಷಣ, ಬೆಂಗಳೂರು ಇವರು ದಿನಾಂಕ 24.10.2021 ಪತ್ರದಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಿದ್ದರು.

ಸದರಿ ವರದಿಯನ್ನು ಕೂಲಕಂಷವಾಗಿ ಪರಿಶೀಲಿಸಲಾಗಿ, ಎಲ್ಲಾ ಎಲೆಕ್ಟ್ರಾನಿಕ್ಸ್ ಸಾಮಗ್ರಿಗಳ, ಯಂತ್ರಗಳ, ಪರಿಕರಗಳ ಖರೀದಿಯ ಸಮಯದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯು ಮೆ|| ಅಕ್ನಾ ಟೆಕ್ನಾಲಜೀಸ್ ಸಂಸ್ಥೆಗೆ ಅನುಕೂಲಕರವಾಗಿ ವರ್ತಿಸಿರುವುದು ಕಂಡುಬಂಧಿರುತ್ತದೆ ಮತ್ತು ಕೆ.ಎಫ್.ಸಿ. ನಿಯಮ 14 ಮತ್ತು 15ರ ಉಲ್ಲಂಘನೆಯಾಗಿರುವುದು ದೃಢಪಟ್ಟಿರುತ್ತದೆ

ಸದರಿ ವರದಿಯಂತೆ ರಾಜ್ಯ ಕೇಂದ್ರ ಗ್ರಂಥಾಲಯ, ಬೆಂಗಳೂರು, ರಾಜ್ಯ ಕೇಂದ್ರ ಗ್ರಂಥಾಲಯ, ಉತ್ತರ ವಲಯ, ಕೇಂದ್ರ ವಲಯ, ದಕ್ಷಿಣ ವಲಯ, ಪೂರ್ವ ವಲಯ, ಪಶ್ಚಿಮ ವಲಯ ಗ್ರಂಥಾಲಯಗಳಲ್ಲಿ ಎಲೆಕ್ಟ್ರಾನಿಕ್ಸ್ ಉಪಕರಣಗಳ ಖರೀದಿಯಲ್ಲಿ ಕರ್ತವ್ಯ ಲೋಪವೆಸಗಿರುವುದು ಕಂಡು ಬಂದಿರುವುದರಿಂದ, ಸದರಿ ಗ್ರಂಥಾಲಯಗಳಲ್ಲಿ ಕರ್ತವ್ಯಲೋಪವೆಸವೆಗಿರುವ ಅಧಿಕಾರಿಗಳು ಹಾಗೂ ನೌಕರರ ಪಟ್ಟಿಯನ್ನು ತಯಾರಿಸಿ, ದೋಷಾರೋಪಣಾ ಪಟ್ಟಿಯನ್ನು (ಅನುಬಂಧ 1 ರಿಂದ 4) ಸಿದ್ಧಪಡಿಸಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ನಿಕಟಪೂರ್ವ ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು ಇವರಿಗೆ ಸರ್ಕಾರದ ದಿನಾಂಕ 11.01.2022ರ ಪತ್ರದಲ್ಲಿ ತಿಳಿಸಲಾಗಿರುತ್ತದೆ.

ಈ ಸಂಬಂಧ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ನಿರ್ದೇಶಕರು, ದಿನಾಂಕ 25.05.2022ರ ಪತ್ರದಲ್ಲಿ ಸರ್ಕಾರಕ್ಕೆ ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, 2019-20ನೇ ಸಾಲಿನಲ್ಲಿ

..2

ಕಾರ್ಯನಿರ್ವಹಿಸಿ ಸೇವೆಯಲ್ಲಿರುವ ಅಧಿಕಾರಿ / ನೌಕರರುಗಳ ಪಟ್ಟಿ ಮಾಡಿ ಸಲ್ಲಿಸದ ಕಾರಣ ಕರ್ತವ್ಯ ಲೋಪವೆಸವೆಗಿರುವ ಅಧಿಕಾರಿಗಳು ಹಾಗೂ ನೌಕರರ ಹೆಸರುಗಳ ಪಟ್ಟಿಯನ್ನು ತಯಾರಿಸಿ, ದೋಷಾರೋಪಣಾ ಪಟ್ಟಿಯನ್ನು (1 ರಿಂದ 4) ಸಿದ್ಧಪಡಿಸಿ ಸಲ್ಲಿಸುವಂತೆ ಹಾಗೂ ಸೇವೆಯಿಂದ ವಯೋನಿವೃತ್ತಿ ಹೊಂದಿದ್ದಲ್ಲಿ ಅಂತಹ ನಿವೃತ್ತ ಅಧಿಕಾರಿ / ನೌಕರರ ವಿರುದ್ಧ 1958ರ ಕರ್ನಾಟಕ ನಾಗರೀಕ ಸೇವಾ ನಿಯಮಗಳ 214ರನ್ವಯ, ಸೇವಾ ವಿವರದೊಂದಿಗೆ ಸರ್ಕಾರದ ಅನುಮತಿಗೆ ಪ್ರಸ್ತಾವನೆ ಸಲ್ಲಿಸುವಂತೆ ಹಾಗೂ ಮೆ. ಅಕ್ನಾ ಟೆಕ್ನಾಲಜಿ ಸಂಸ್ಥೆಯು ಯಾವ ಅವಧಿಯಿಂದ ಯಾವ ಅವಧಿಯವರೆಗೆ ನಿರ್ದೇಶಕರ ಕಛೇರಿಯೂ ಸೇರಿದಂತೆ ರಾಜ್ಯಾದ್ಯಂತ ಇತರೆ ಕಛೇರಿಗಳಿಗೆ ಝೆರಾಕ್ಸ್ ಯಂತ್ರ, ಕಂಪ್ಯೂಟರ್, ಸಿಸಿ ಕ್ಯಾಮರಾ ಸೇರಿದಂತೆ ಹಲವಾರು ಸಾಮಗ್ರಿಗಳನ್ನು ಸರಬರಾಜು ಮಾಡಿರುವ ಬಗ್ಗೆ ಪರಿಶೀಲಿಸಿ, ವಿವರವಾದ ಮಾಹಿತಿಯನ್ನು ಒದಗಿಸುವಂತೆ ನಿರ್ದೇಶಕರಿಗೆ ತಿಳಿಸಲಾಗಿತ್ತು.

ತದನಂತರದಲ್ಲಿ ದಿನಾಂಕ 04.12.2023ರಂದು ನಿಕಟಪೂರ್ವ ನಿರ್ದೇಶಕರು ಒದಗಿಸಿರುವ ಮಾಹಿತಿಯನ್ನು ಮತ್ತೊಮ್ಮೆ ಪರಿಶೀಲಿಸಿ, ಪೂರ್ವ ಪ್ರಸ್ತಾಪಿತ ಪ್ರಕರಣದ ಸಂಬಂಧದಲ್ಲಿ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲು ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಇವರಿಗೆ ಸರ್ಕಾರದ ದಿನಾಂಕ 06.08.2024ರ ಪತ್ರದಲ್ಲಿ ತಿಳಿಸಲಾಗಿತ್ತು.

(i) ಪ್ರಸ್ತುತ ಸಾರ್ವಜನಿಕ ಗ್ರಂಥಾಲಯ ಇಲಾಖೆಗೆ ಕಳಪೆ ಸಾಮಗ್ರಿಗಳನ್ನು ಪೂರೈಸಿ ಅಕ್ರಮವೆಸಗಿರುವ ಬಗ್ಗೆ ನೀಡಿರುವ ವರದಿಯಲ್ಲಿ ಕೆ.ಟಿ.ಪಿ.ಪಿ. ನಿಯಮಗಳನ್ನು ಉಲ್ಲಂಘಿಸಿ ಖರೀದಿಸಿರುವುದಕ್ಕೆ ಸಂಬಂಧಿಸಿದಂತೆ ಮಾತ್ರ ಪರಿಶೀಲಿಸಲಾಗಿದ್ದು, ಸಾಮಗ್ರಿಗಳನ್ನು ಪಡೆಯಲು ಆದೇಶ ನೀಡಿರುವ ಮತ್ತು ಹಣ ಸಂದಾಯ ಮಾಡಿರುವ ಬಟವಾಡೆ ಅಧಿಕಾರಿಗಳ ಮೇಲೆ ಕ್ರಮವಹಿಸಲು ಅನುಕೂಲವಾಗುವಂತೆ ದೋಷಾರೋಪಣಾ ಪಟ್ಟಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸುವುದು.

(ii) ಗುಣಮಟ್ಟದ ಸಾಮಗ್ರಿಗಳನ್ನು ಪೂರೈಸಲಾಗಿದೆಯೇ ಎಂಬ ಬಗ್ಗೆ ಪ್ರಸ್ತುತ ಬೆಂಗಳೂರು ನಗರದ ಗ್ರಂಥಾಲಯಗಳ ಕುರಿತು ಮಾತ್ರ ತನಿಖೆ ಮಾಡಲಾಗಿದ್ದು, ಇದೇ ರೀತಿಯ ಖರೀದಿಯನ್ನು ರಾಜ್ಯದ ಇತರೆ ಗ್ರಂಥಾಲಯಗಳಲ್ಲಿ ಮಾಡಲಾಗಿದೆಯೇ, ಮಾಡಿದ್ದಲ್ಲಿ ಅದರ ಬಗ್ಗೆ ಮುಂದುವರೆದ ತನಿಖೆಯನ್ನು ನಡೆಸುವ ಅಗತ್ಯತೆಯ ಬಗ್ಗೆ ಪರಿಶೀಲಿಸುವುದು.

ಅದರಂತೆ, ಬೆಂಗಳೂರು ನಗರದ ಪೂರ್ವ, ಪಶ್ಚಿಮ, ದಕ್ಷಿಣ, ಉತ್ತರ ಮತ್ತು ಕೇಂದ್ರ ವಲಯದ ಗ್ರಂಥಾಲಯಗಳ 07 ಅಧಿಕಾರಿಗಳ ವಿರುದ್ಧ ದೋಷಾರೋಪಣಾ ಪಟ್ಟಿಗಳನ್ನು ಸಿದ್ಧಪಡಿಸಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯು ದಿನಾಂಕ 03.12.2024ರಂದು ಸರ್ಕಾರಕ್ಕೆ ಸಲ್ಲಿಸಿದ್ದು, ಪ್ರಕರಣವು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ.

**ಸಂಖ್ಯೆ: ಇಪಿ/ 185 /ಎಲ್ಐಬಿ /2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು